# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಡಗು–ಮಡಿಕೇರಿ

## SC No. 84/2024

| | | | |
|---|---|---|---|
| ಸಾಕ್ಷಿದಾರರ ಹೆಸರು | : | **ಶ್ರೀ ರಾಜೇಶ್** | **PW – 3** |
| ತಂದೆಯ ಹೆಸರು | : | **ನಿಂಗರಾಜು** | **CW – 4** |
| ವಯಸ್ಸು | : | **48 ವರ್ಷ** | |
| ವೃತ್ತಿ | : | **ವ್ಯವಸಾಯ** | |
| ವಾಸ | : | **ಬೇಳೂರು ಬಸವನಹಳ್ಳಿ ಗ್ರಾಮ,<br>ಸೋಮವಾರಪೇಟೆ ತಾಲೂಕು** | |

**ಸಾಕ್ಷಿಯನ್ನು ದಿನಾಂಕ 08–12–2025 ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**<u>ಮುಖ್ಯ ವಿಚಾರಣೆ: ಸರ್ಕಾರಿ ಅಭಿಯೋಜಕರಿಂದಃ</u>**

1. ನನಗೆ ಚಾಸಾ–1, ಪ್ರಾಸಾ–1, ಮತ್ತು ಚಾಸಾ–5 ಇವರ ಪರಿಚಯ ಇರುತ್ತದೆ. ಪ್ರಾಸಾ–2 ನನಗೆ ತಾಯಿ ಆಗಬೇಕು. ಚಾಸಾ–6 ನನಗೆ ಅಣ್ಣನಾಗಬೇಕು. ಆರೋಪಿತರ ಪರಿಚಯ ಇರುತ್ತದೆ. ಆರೋಪಿತರು ನಮ್ಮ ಮನೆಯ ಮುಂದಿನ ಅಂಗಳದಲ್ಲಿ ಪೂಜೆ ಸಮಯದಲ್ಲಿ ಆರೋಪಿತರು ನಂದೀಶ್ ಈತನನ್ನು ಕೊಲೆ ಮಾಡದೆ ಬಿಡುವುದಿಲ್ಲ ಎಂದು ಹೆದರಿಸಿ ಬೀರ್ ಬಾಟಲಿನಿಂದ ಹೊಡೆದು ಹೊಟ್ಟೆಗೆ ಚುಚ್ಚಿ ಕೊಲೆ ಮಾಡಲು ಪ್ರಯತ್ನ ಮಾಡಿರುವುದಿಲ್ಲ. ಆ ಬಗ್ಗೆ ನಾನು ಪೊಲೀಸರಿಗೆ ಹೇಳಿಕೆ ಕೊಟ್ಟಿರುವುದಿಲ್ಲ.

**(ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ**

**ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲು– ಸರ್ಕಾರಿ ಅಭಿಯೋಜಕರಿಂದಃ</u>**

1. ದಿನಾಂಕ 31.10.2023 ರಂದು ಮಧ್ಯಾಹ್ನ 1.30 ಗಂಟೆಗೆ ನಿಮ್ಮ ಮನೆಯ ಮುಂದಿನ ಅಂಗಳದಲ್ಲಿ ಪೂಜೆ ಸಮಯದಲ್ಲಿ ಆರೋಪಿತರು ನಂದೀಶ್ ಈತನನ್ನು ಕೊಲೆ ಮಾಡದೆ ಬಿಡುವುದಿಲ್ಲ ಎಂದು, ಅವಾಚ್ಯ ಶಬ್ದದಿಂದ ಬೈದು, 1 ನೇ ಆರೋಪಿತನು ನಿನ್ನನ್ನು ಕೊಲೆ ಮಾಡದೇ ಬಿಡುವುದಿಲ್ಲ ಎಂದು ಬೀರ್ ಬಾಟಲಿಯನ್ನು ಕಲ್ಲಿಗೆ ಹೊಡೆದು ನಂದೀಶನ ಹೊಟ್ಟೆಯ ಭಾಗಕ್ಕೆ ಚುಚ್ಚಿದನು ಎಂದು ಸೂಚಿಸುವುದು ಸರಿಯಲ್ಲ. ಆ ಸಮಯದಲ್ಲಿ 2 ನೇ ಆರೋಪಿತನು 1 ನೇ ಆರೋಪಿತನಿಂದ ಬೀರ್ ಬಾಟಲಿಯನ್ನು ಕಸಿದುಕೊಂಡು ನಂದೀಶನ ಬೆನ್ನಿನ ಎಡಭುಜಕ್ಕೆ ಹೊಡೆದಿರುತ್ತಾನೆ ಎಂದು ಸೂಚಿಸುವುದು ಸರಿಯಲ್ಲ. ಆ ಸಮಯದಲ್ಲಿ 3 ನೇ ಆರೋಪಿತನು ನಂದೀಶನನ್ನು ಗಟ್ಟಿಯಾಗಿ ಹಿಡಿದುಕೊಂಡಿದ್ದನು ಎಂದು ಸೂಚಿಸುವುದು ಸರಿಯಲ್ಲ. ನನ್ನ ಅಣ್ಣ ಪ್ರವೀಣ್ ಜಗಳ ಬಿಡಿಸಿದ್ದಾನೆ ಎಂದು ಸೂಚಿಸುವುದು ಸರಿಯಲ್ಲ. ನಾನು ಪೊಲೀಸರ ಮುಂದೆ ಈಗ ಓದಿ ಹೇಳಿದಂತೆ "ನಾನು ಈ ಮೇಲಿನ ವಿಳಾಸದಲ್ಲಿ ……………………ನೋಡಿದರೆ ಗುರುತಿಸುತ್ತೇನೆ" ಎಂದು ಹೇಳಿಕೆ ಕೊಟ್ಟಿರುವುದಿಲ್ಲ. ಸದರಿ ಹೇಳಿಕೆಯನ್ನು **ನಿಪಿ–3** ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು– 1 ರಿಂದ 3 ನೇ ಆರೋಪಿತರ ಪರ ವಕೀಲರಾದ ಶ್ರೀ. ಕೆ.ಎ.ಕೆ.ಆರ್ ರವರಿಂದಃ</u>**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರಿಂದ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ** ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/-

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಕೊಡಗು-ಮಡಿಕೇರಿ.